ಮಾಡಿಕೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ. ಮತ್ತು ಮಾನ್ಯ ಮುಖ್ಯಮಂತ್ರಿಗಳು ಕೊಟ್ಟಿರುವ ಭರವಸೆಯ ಮೇಲೆ, ಅವರ ಮೇಲೆ ನಂಬಿಕೆಯನ್ನಿಟ್ಟು ನನ್ನ ತಿದ್ದುಪಡಿಯನ್ನು ವಾಪಸ್ ತೆಗೆದುಕೊಂಡಿದ್ದೇನೆ.

ಅಧ್ಯಕ್ಷರು : ಖಂಡ 2ಕ್ಕೆ ಸೂಚಿಸಿರುವ ತಿದ್ದುಪಡಿಗಳನ್ನು ವಾಪಸ್ಸು ಪಡೆಯಲು ಮಾನ್ಯ ಸದಸ್ಯರಾದ ಶ್ರೀ ಸಿ. ಭೈರೇಗೌಡ ಹಾಗೂ ಶ್ರೀ ವಾಟಾಳ್ ನಾಗರಾಜ್ ರವರಿಗೆ ಸಭೆಯು ಅನುಮತಿ ನೀಡುತ್ತದೆಯೇ?

ಮಾನ್ಯ ಸದಸ್ಯರು : ಹೌದು.

(ಸದನವು ತಿದ್ದುಪಡಿಗಳನ್ನು ವಾಪಸ್ಸು ಪಡೆಯಲು ಮಾನ್ಯ ಸದಸ್ಯರುಗಳಿಗೆ ಅನುಮತಿ ನೀಡಿತು)

ಖಂಡ ಖಂಡವಾಗಿ ವಿಧೇಯೇಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 27ರ ವರೆಗೆ

ಅಧ್ಯಕ್ಷರು : " ಖಂಡ 2 ರಿಂದ 27ರವರೆಗೆ, ಎರಡೂ, ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀರಿಸಲ್ಪಟ್ಟಿತು.

(ಖಂಡ 2 ರಿಂದ 27 ರವರೆಗೆ ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "ಮೊದಲನೆ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಆರ್.ಎನ್. ನಾಯಕ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಮಂತ್ರಿಗಳು) : "1994ನೇ ಸಾಲಿನ ಕನ್ನಡ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "1994ರ ಕನ್ನಡ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ಆಡಳಿತಾತ್ಮಕ ಪ್ರಕ್ರಿಯ ವಿಧೇಯಕದ ಜಂಟಿ ಪರಿಶೀಲನಾ ಸಮಿತಿಗೆ ಕಾಲಾವಕಾಶ ನೀಡುವ ಬಗ್ಗೆ.

ಶ್ರೀ ಎಂ. ವೀರಪ್ಪ ಮೊಯ್ಲಿ (ಮುಖ್ಯಮಂತ್ರಿಗಳು) : ಸನ್ಮಾನ್ಯ ಅಧ್ಯಕ್ಷರೇ, 1991ನೇ ಇಸವಿಯ ಕರ್ನಾಟಕ ಆಡಳಿತಾತ್ಮಕ ಪ್ರಕ್ರಿಯೆ ವಿಧೇಯಕ ಜಂಟಿ ಪರಿಶೀಲನಾ ಸಮಿತಿಯ ವರದಿಯನ್ನು ಒಪ್ಪಿಸಲು 1994ರ ಅಕ್ಟೋಬರ್ ಅಂತ್ಯದವರೆಗೆ ಕಾಲಾವಕಾಶವನ್ನು ಕೊಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ : "1991ನೇ ಇಸವಿಯ ಕರ್ನಾಟಕ ಆಡಳಿತಾತ್ಮಕ ಪ್ರಕ್ರಿಯೆ ವಿಧೇಯಕ ಜಂಟಿ ಪರಿಶೀಲನಾ ಸಮಿತಿಯ ವರದಿಯನ್ನು ಒಪ್ಪಿಸಲು 1994ರ ಅಕ್ಟೋಬರ್ ಅಂತ್ಯದವರೆಗೆ ಕಾಲಾವಕಾಶವನ್ನು ನೀಡುವುದು."

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಹಾಗೂ ಮೇಲ್ಕಂಡ ಸಮಿತಿಗೆ ವರದಿ ಒಪ್ಪಿಸಲು ಅಕ್ಟೋಬರ್ ಅಂತ್ಯದವರೆಗೆ ಕಾಲಾವಕಾಶ ನೀಡಲಾಯಿತು).

ಪ್ರಕಟಣೆ

ವಿಷಯ : ಕಾರ್ಯಕಲಾಪಗಳ ಸಲಹಾ ಸಮಿತಿಯ ನಿರ್ಧಾರಗಳೂ

ವಿಧಾನಸಭಾ ಕಾರ್ಯಕಲಾಪಗಳ ಸಲಹಾ ಸಮಿತಿಯು ಇಂದು ದಿನಾಂಕ 01-09-94ರಂದು 5-00 ಗಂಟೆಗೆ ಸಭೆ ಸೇರಿ ಈ ಕೆಳಕಂಡ ಕಾರ್ಯಕಲಾಪಗಳನ್ನು ಕೈಗೊಳ್ಳಬೇಕಾಗಿ ತೀರ್ಮಾನಿಸಿತು.

ಶುಕ್ರವಾರ ದಿನಾಂಕ : 02-9-94 ರಂದು ಬೆಳಿಗ್ಗೆ 11-00ಗಂಟೆಗೆ	:	ಪ್ರಶ್ನೋತ್ತರಗಳು, ಗಮನ ಸೆಳೆಯುವ ಬೇಡಿಕೆಯ ಮೇಲೆ ಚರ್ಚೆ ಹಾಗೂ ಮತಕ್ಕೆ ಹಾಕುವುದು, ವಿಧೇಯಕಗಳ ಮಂಡನೆ, ಚರ್ಚೆ ಹಾಗೂ ಮತಕ್ಕೆ ಹಾಕುವುದು.
ಶನಿವಾರ ದಿನಾಂಕ 03-9-94 ರಂದು ಬೆಳಿಗ್ಗೆ 11-00 ಗಂಟೆಗೆ	:	ಗಮನಸೆಳೆಯುವ ಸೂಚನೆಗಳು, ಬೇಡಿಕೆಗಳ ಮೇಲೆ ಚರ್ಚೆ ಹಾಗೂ ಮತಕ್ಕೆ ಹಾಕುವುದು. ವಿಧೇಯಕಗಳ ಮಂಡನೆ, ಚರ್ಚೆ ಹಾಗೂ ಮತಕ್ಕೆ ಹಾಕುವುದು.
ಭಾನುವಾರ ದಿನಾಂಕ 04-9-94		ರಜಾ ದಿನ
ಸೋಮವಾರ ದಿನಾಂಕ : 05-9-94 ಬೆಳಿಗ್ಗೆ 11-00 ಗಂಟೆಗೆ	:	ಪ್ರಶ್ನೋತ್ತರಗಳು, ಗಮನ ಸೆಳೆಯುವ ಸೂಚನೆಗಳು, ಬೇಡಿಕೆಗಳ ಮೇಲೆ ಚರ್ಚೆ ಹಾಗೂ ಮತಕ್ಕೆ ಹಾಕುವುದು. 1994-5ನೇ ಸಾಲಿನ ಅನುದಾನಗಳ ಬೇಡಿಕೆಗಳ ಮೇಲಿನ ಚರ್ಚೆ ಹಾಗೂ ಮತಕ್ಕೆ ಹಾಕುವುದು. 1994-95ನೇ ಸಾಲಿನ ಅನುಪೂರಕ ಅಂದಾಜುಗಳ (ಮೊದಲನೇ ಕಂತು) ಚರ್ಚೆ ಹಾಗೂ ಮತಕ್ಕೆ ಹಾಕುವುದು. 1994-95ನೇ ಸಾಲಿನ ಅನುದಾನಗಳ ಬೇಡಿಕೆಗಳಿಗೆ ಸಂಬಂಧಿಸಿದಂತೆ ಧನ ವಿನಿಯೋಗ ವಿಧೇಯಕ ಮಂಡನೆ ಪರ್ಯಾಲೋಚನೆ ಹಾಗೂ ಅಂಗೀಕರಿಸುವುದು. 1994-95ನೇ ಸಾಲಿನ ಅನುಪೂರಕ ಅಂದಾಜುಗಳ (ಮೊದಲನೇ ಕಂತು) ಸಂಬಂಧಿಸಿದಂತೆ ವಿಧೇಯಕ ಮಂಡನೆ